# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಡಾ. ಎಂ.ಡಿ.ಸುದರ್ಶನ್, ಕನ್ನಡ ಉಪನ್ಯಾಸಕರು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಬಸವನಹಳ್ಳಿ, ಚಿಕ್ಕಮಗಳೂರು ಇವರ ಸೇವೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಖಾಯಂ ವಿಲೀನಗೊಳಿಸುವ ಬಗ್ಗೆ

**ಓದಲಾಗಿದೆ:**
1. ಮಾನ್ಯ ಇಲಾಖಾ ಸಚಿವರ ನಡವಳಿ ಸಂಖ್ಯೆ: ಪ್ರಕಸಂಯುಸಕ್ರೀಸ/24/2020, ದಿನಾಂಕ:12.05.2020.
2. ಶಿಕ್ಷಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಇಡಿ 136 ಡಿಜಿಡಿ 2018, ದಿನಾಂಕ: 20.06.2020

**ಪ್ರಸ್ತಾವನೆ:**

ಡಾ. ಎಂ.ಡಿ.ಸುದರ್ಶನ್, ಕನ್ನಡ ಉಪನ್ಯಾಸಕರು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಬಸವನಹಳ್ಳಿ, ಚಿಕ್ಕಮಗಳೂರು ಜಿಲ್ಲೆ ಇವರ ಹುದ್ದೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಹುದ್ದೆಗೆ ಕರ್ನಾಟಕ ನಾಗರೀಕ ಸೇವಾ ಸಾಮಾನ್ಯ ನೇಮಕಾತಿ ನಿಯಮಗಳ 1977ರ ನಿಯಮ 16(ಎ)(ii)ರಂತೆ ಖಾಯಂ ವಿಲೀನಗೊಳಿಸುವ ಸಂಬಂಧ ಕಡತ ಸಂಖ್ಯೆ ಇಡಿ 136 ಡಿಜಿಡಿ 2018 ಅನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ ಕಡತವನ್ನು ಅನುಮೋದಿಸಿ ಶಿಕ್ಷಣ ಇಲಾಖೆಯಿಂದ ಸದರಿಯವರ ಸೇವೆಯನ್ನು ಬಿಟ್ಟುಕೊಡಲು ಸಹಮತಿ ನೀಡಿ ಆದೇಶಿಸಲು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರನ್ನು ಮೇಲೆ ಓದಲಾದ (1)ರ ನಡವಳಿಯಲ್ಲಿ ಕೋರಿರುತ್ತಾರೆ.

ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ನಡವಳಿಯನ್ನು ಪರಿಶೀಲಿಸಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕ ವೃಂದದ ಅಧಿಕಾರಿಯಾಗಿರುವ ಶ್ರೀ ಡಾ. ಎಂ.ಡಿ.ಸುದರ್ಶನ್, ಕನ್ನಡ ಉಪನ್ಯಾಸಕರು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಬಸವನಹಳ್ಳಿ, ಚಿಕ್ಕಮಗಳೂರು, ಇವರ ಸೇವೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಹುದ್ದೆಗೆ ಖಾಯಂ ಆಗಿ ವಿಲೀನಗೊಳಿಸಲು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 16(ಎ)(ii)ರಂತೆ ಶಿಕ್ಷಣ ಇಲಾಖೆಯ ಸಹಮತಿಯನ್ನು ನೀಡಲಾಗಿದೆ ಎಂದು ತಿಳಿಸಿರುತ್ತಾರೆ.

ಮೇಲೆ ತಿಳಿಸಿರುವಂತೆ ಎರಡೂ ಇಲಾಖೆಗಳೂ ಸಮ್ಮತಿಸಿರುವುದರಿಂದ ಡಾ. ಎಂ.ಡಿ.ಸುದರ್ಶನ್, ಕನ್ನಡ ಉಪನ್ಯಾಸಕರು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಬಸವನಹಳ್ಳಿ, ಚಿಕ್ಕಮಗಳೂರು ಜಿಲ್ಲೆ ಇವರನ್ನು ಕರ್ನಾಟಕ ನಾಗರೀಕ ಸೇವಾ ಸಾಮಾನ್ಯ ನೇಮಕಾತಿ ನಿಯಮಗಳು 1977ರ ನಿಯಮ 16(ಎ)(ii)ರಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಖಾಯಂ ಆಗಿ ವಿಲೀನಗೊಳಿಸುವ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲು ಉದ್ದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 43 ಕಸನಿ 2020 ಆಕ ಬೆಂಗಳೂರು, ದಿನಾಂಕ: 03.08.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಡಾ. ಎಂ.ಡಿ.ಸುದರ್ಶನ್, ಕನ್ನಡ ಉಪನ್ಯಾಸಕರು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಬಸವನಹಳ್ಳಿ, ಚಿಕ್ಕಮಗಳೂರು ಜಿಲ್ಲೆ ಇವರ ಸೇವೆಯನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 16(ಎ)(ii)ರನ್ವಯ, ಸಾರ್ವಜನಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ವಿಲೀನಗೊಳಿಸಿ ಆದೇಶಿಸಿದೆ.

1. ಸಂಬಂಧ ಪಟ್ಟ ಅಧಿಕಾರಿಯವರು ಸಕ್ರಮವಾಗಿ ನೇಮಕ ಮಾಡಿಕೊಂಡಿರಬೇಕು ಹಾಗೂ ಅವರು ತಮ್ಮ ಮಾತೃ ಇಲಾಖೆಯಲ್ಲಿ ಪರಿವೀಕ್ಷಣಾ ಅವಧಿ/ ಸ್ಥಾನಪನ್ನ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರಬೇಕು.
2. ಸಂಬಂಧಪಟ್ಟ ಅಧಿಕಾರಿಯು ವರ್ಗಾವಣೆ ಮೂಲಕ ನೇಮಿಸಲು ಉದ್ದೇಶಿಸಿರುವ ಹುದ್ದೆಗೆ ನಿಗಧಿಪಡಿಸಿರಬಹುದಾದ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆಯಾಗಿರಬೇಕು. ಒಂದು ವೇಳೆ ನಿಗದಿಪಡಿಸಲಾಗಿರುವ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆಯಾಗಿರದಿದ್ದಲ್ಲಿ ಮುಂದಿನ 2 ವರ್ಷಗಳೊಳಗಾಗಿ ಉತ್ತೀರ್ಣರಾಗಬೇಕು.
3. ವಿಲೀನಾತಿ ಅವಕಾಶವು ಈ ಅಧಿಕಾರಿಯ ಸೇವಾ ಅವಧಿಯಲ್ಲಿ ಒಮ್ಮೆ ಮಾತ್ರ ಇರತಕ್ಕದ್ದು.
4. ಸದರಿ ಅಧಿಕಾರಿಯ ವಿಲೀನ ಪ್ರಕ್ರಿಯೆಯನ್ನು ಆಡಳಿತಾತ್ಮಕ ಹಿತದೃಷ್ಟಿಯಲ್ಲಿ ಪರಿಗಣಿಸಿರುವುದರಿಂದ ಇವರ ಜೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 6ರ 2ನೇ ಪರಂತಕುದನ್ವಯ ನಿರ್ಧರಿಸುವುದು.
5. ಈ ಬಗ್ಗೆ ನೌಕರರ ಒಪ್ಪಿಗೆಯನ್ನು ಬರವಣಿಗೆಯ ಮೂಲಕ ಪಡೆಯುವುದು.
6. ಸದರಿ ಅಧಿಕಾರಿಯು ಈ ಹಿಂದೆ ಹೊರಗುತ್ತಿಗೆ ಸೇವೆ ಸಲ್ಲಿಸಿದ್ದಲ್ಲಿ ಅರ್ಹತಾದಾಯಕ ಸೇವೆಯ ಸೌಲಭ್ಯ ಪಡೆಯಲು ಮನವಿ ಸಲ್ಲಿತಕ್ಕದ್ದಲ್ಲ.
7. ಆರ್ಥಿಕ ಇಲಾಖೆಯು ಸದರಿ ವಿಷಯದಲ್ಲಿ ನಿರ್ದಿಷ್ಟ ಪಡಿಸಬಹುದಾದ ಎಲ್ಲಾ ನಿಬಂಧನೆಗಳಿಗೆ ಮೇಲಿನ ಆದೇಶವು ಒಳಪಡುತ್ತದೆ.

ಈ ಆದೇಶವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಸಿಆಸುಇ 122 ಸೇನಿಅ 2020, ದಿನಾಂಕ: 02.07.2020ರಲ್ಲಿ ನೀಡಿರುವ ಅಭಿಪ್ರಾಯದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಕೆ.ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
(ಆಡಳಿತ ಕನ್ನಡ)

ಪ್ರತಿ:

1. ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
3. ಸರ್ಕಾರದ ಕಾರ್ಯದರ್ಶಿಯವರು, ಸಿಆಸುಇ, ವಿಧಾನಸೌಧ, ಬೆಂಗಳೂರು.
4. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು
6. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
7. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪದವಿಪೂರ್ವ), ಬಹುಮಹಡಿ ಕಟ್ಟಡ, ಬೆಂಗಳೂರು.